# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 30-03-2021 ಪ್ರಶ್ನೆ ಸಂಖ್ಯೆ : 2097(2439)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಸ್. ನಾಗರಾಜ್(ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 30-03-2021

ಉತ್ತರಿಸುವ ಸಚಿವರು: ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು

ವಿಷಯ : ಮೈಸೂರಿನಲ್ಲಿ ಚಿತ್ರನಗರಿಯನ್ನು ಸ್ಥಾಪಿಸುವ ಬಗ್ಗೆ

(ಅ) ಮೈಸೂರು ಜಿಲ್ಲೆ, ನಂಜನಗೂಡು ತಾಲ್ಲೂಕು, ಇಮ್ಮಾವು (ಹಿಮ್ಮಾವು) ಬಳಿ ಚಿತ್ರನಗರಿಯನ್ನು (ಫಿಲ್ಮ್ ಸಿಟಿ) ಸ್ಥಾಪಿಸುವ ಯೋಜನೆಯನ್ನು ಪುನರುಜ್ಜೀವನಗೊಳಿಸಿ, ಇಲ್ಲಿಯೇ ಚಿತ್ರನಗರಿಯನ್ನು ಸ್ಥಾಪಿಸಲು ಕ್ರಮ ಜರುಗಿಸಲಾಗುವುದೇ; ಗದ್ದಲಗೌಜುಗಳಿಲ್ಲದ ಈ ಸ್ಥಳವು ಚಿತ್ರನಗರಿಯ ಸ್ಥಾಪನೆಗೆ ಸೂಕ್ತವಾಗಿದೆಯೆಂಬುದು ಸರ್ಕಾರದ ಗಮನದಲ್ಲಿದೆಯೇ;

(ಆ) ಮೈಸೂರು ಜಿಲ್ಲೆಯ ಹಿಮ್ಮಾವಿನಲ್ಲಿ ಈಗಾಗಲೇ ಚಿತ್ರನಗರಿಗಾಗಿ ಸ್ವಾಧೀನಪಡಿಸಿಕೊಂಡಿದ್ದ ಭೂಮಿಯ ವಿಸ್ತೀರ್ಣ ಎಷ್ಟು; ಪ್ರಸ್ತುತ ಸದರಿ ಭೂಮಿಯು ಯಾರ ವಶದಲ್ಲಿದೆ;

(ಇ) ಮೈಸೂರು, ಚಾಮರಾಜನಗರ, ಹಾಸನ, ಮಂಡ್ಯ ಜಿಲ್ಲೆಗಳಲ್ಲಿ ಸುಮಾರು 200ಕ್ಕೂ ಹೆಚ್ಚು ಪ್ರವಾಸೋದ್ಯಮ ಪ್ರಕೃತಿಸೌಂದರ್ಯ ತಾಣಗಳಿದ್ದು, ಮೈಸೂರು ಜಿಲ್ಲೆಯಲ್ಲಿ ಚಿತ್ರನಗರಿ ಸ್ಥಾಪನೆಯಿಂದ ಚಿತ್ರೀಕರಣಕ್ಕೆ ಅನುಕೂಲವಾಗುವುದರ ಜೊತೆಗೆ ಪ್ರವಾಸೋದ್ಯಮಕ್ಕೆ ಕೂಡಾ ಕಾಯಕಲ್ಪ ನೀಡಿದಂತಾಗುವುದಿಲ್ಲವೇ?